## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಟಿ.ನರಸೀಪುರ

ದಿನಾಂಕ 19 ನೇ ಫೆಬ್ರವರಿ 2026

**ಸಿ.ಸಿ. 388/2026**

ಪಿರ್ಯಾದುದಾರರುಃ ರಾಜ್ಯದ ಪರ ಬನ್ನೂರು ಪೊಲೀಸರು

ವಿರುದ್ಧ

ಆರೋಪಿಃ ವಿಜಯ್ ಡಿ.ವಿ ಬಿನ್ ವೆಂಕಟೇಶ್, 23 ವರ್ಷ,
ವಾಸಃ ಬೂತಗಹಳ್ಳಿ ಗ್ರಾಮ, ಬನ್ನೂರು ಹೋಬಳಿ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

### ಆರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.**

ದಿನಾಂಕ 19.08.2025 ರಂದು ಸಂಜೆ 4.00 ಗಂಟೆ ಸಮಯದಲ್ಲಿ ಬನ್ನೂರು ಠಾಣಾ ವ್ಯಾಪ್ತಿಯಲ್ಲಿ ಬಿ.ಸೀಹಳ್ಳಿ ಗ್ರಾಮದ ಸಣ್ಣೇಗೌಡ ಬಿನ್ ಲೇಟ್ ಚಿಕ್ಕರಸೇಗೌಡರ ಮನೆಯ ಮುಂಭಾಗ ಹಾದು ಹೋಗಿರುವ ಬಿ.ಸೀಹಳ್ಳಿ ಅರವಟ್ಟಿಗೆಕೊಪ್ಪಲು ರಸ್ತೆಯಲ್ಲಿ ಆರೋಪಿಯಾದ ನೀವು ಚಾಸಾ-7 ಮನು ಬಿ ರವರ ಟಾಟಾ ಏಸ್ ಗೂಡ್ಸ್ ವಾಹನ ಸಂಖ್ಯೆ ಕಎ-44-7874 ನ್ನು ಬಿ.ಸೀಹಳ್ಳಿ ಕಡೆಯಿಂದ ಚಾಮಲಾಪುರ ಕಡೆಗೆ ಮಾನವ ಪ್ರಾಣಕ್ಕೆ ಹಾನಿ ಉಂಟು ಮಾಡುವ ರೀತಿಯಲ್ಲಿ ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಅಪಘಾತಕ್ಕೆ ಕಾರಣರಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಕೊನೆಯದಾಗಿ ಮೇಲೆ ಹೇಳಿರುವ ದಿನಾಂಕ, ಸಮಯ ಮತ್ತು ಸ್ಥಳದಂದು ಆರೋಪಿಯಾದ ನೀವು ಟಾಟಾ ಏಸ್ ಗೂಡ್ಸ್ ವಾಹನವನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಚಾಸಾ-2 ಬಸವರಾಜುರವರು ಚಾಲನೆ ಮಾಡುತ್ತಿದ್ದ ರಾಯಲ್ ಎನ್ ಫೀಲ್ಡ್ ಮೋಟಾರು ಸೈಕಲ್ ಸಂಖ್ಯೆ ಕೆಎ-05-ಜೆ.ಜಡ್-2480 ಗೆ ಡಿಕ್ಕಿ ಮಾಡಿದ ಪರಿಣಾಮ ಚಾಸಾ-2 ರವರು ಬೈಕ್ ಸಮೇತ ಕೆಳಗೆ ಬಿದ್ದು ಬಲಗಾಲಿನ

ಮೊಣಕಾಲಿನ ಕೆಳಭಾಗದ ಮೂಳೆ ಮುರಿದು ತೀವ್ರ ಸ್ವರೂಪದ ಗಾಯ ಉಂಟಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(b)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

**(ಮೇಲ್ಕಂಡ ಆರೋಪಗಳ ಬಗ್ಗೆ ಆರೋಪಿಯಾದ ನೀವು ಈ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದ್ದು ಎಂದು ನಾನು ನಿರ್ದೇಶಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**<u>ಆರೋಪಿಯ ಹೇಳಿಕೆ</u>**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ , ಟಿ.ನರಸೀಪುರ.**

**<u>ಆರೋಪಿ ಸಹಿಃ</u>**